**"ನ್ಯಾಯಬೆಲೆ ಅಂಗಡಿಗಳಲ್ಲಿನ ಪಡಿತರಗಳ ಪ್ರಮಾಣವನ್ನು ಹೆಚ್ಚಿಸುವುದು**

3228 (3702) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ನ್ಯಾಯಬೆಲೆ ಅಂಗಡಿಗಳಲ್ಲಿ ಹಾಲಿ ಯಾವ ಯಾವ ಪಡಿತರುಗಳನ್ನು/ಪದಾರ್ಥಗಳನ್ನು ಎಷ್ಟೆಷ್ಟು ಪ್ರಮಾಣದಲ್ಲಿ ನೀಡಲಾಗುತ್ತಿದೆ;

ಆ) ಪಡಿತರ ವ್ಯವಸ್ಥೆಯಲ್ಲಿ ಬಡವರ ಆಹಾರ, ಪೌಷ್ಟಿಕ ಆಹಾರ ರಾಗಿಯನ್ನು ಸೇರಿಸುವ ವಿಚಾರದಲ್ಲಿ ಸರ್ಕಾರದ ನಿಲುವೇನು?

ಇ) ಹಾಲಿ ನೀಡುತ್ತಿರುವ ಪಡಿತರ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ಖಚಿತ ನಿಲುವೇನು?

ಶ್ರೀ ರಾಮಲಿಂಗಾರೆಡ್ಡಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ನ್ಯಾಯಬೆಲೆ ಅಂಗಡಿಗಳಲ್ಲಿ ವಿತರಿಸಲಾಗುತ್ತಿರುವ ಪದಾರ್ಥಗಳ ಪ್ರಮಾಣ ಕೆಳಕಂಡಂತಿದೆ.

ಪ್ರತಿ ಪಡಿತರ ಚೀಟಿಗೆ :

| | | |
|---|---|---|
| ಅಕ್ಕಿ | – | 28 |
| ಗೋಧಿ | – | 07 |
| ಸಕ್ಕರೆ | – | 2 ರಿಂದ 3 ಕೆ.ಜಿ. |

ಸೀಮೆಎಣ್ಣೆ :

| | | |
|---|---|---|
| ಅನೌಪಚಾರಿಕ ಪಡಿತರ ಪ್ರದೇಶದಲ್ಲಿ : | | 10 ಲೀಟರ್ |
| ನಗರ/ಪಟ್ಟಣ ಪ್ರದೇಶದಲ್ಲಿ | : | 08 ಲೀಟರ್ |
| ಗ್ರಾಮಾಂತರ ಪ್ರದೇಶದಲ್ಲಿ | : | 4 ರಿಂದ 5 ಲೀಟರ್. |

ಆ) ರಾಗಿಯನ್ನು ಪಡಿತರ ವ್ಯವಸ್ಥೆಯಡಿಯಲ್ಲಿ ಸೇರಿಸಲಾಗಿದೆ.

ಕನಿಷ್ಠ ಬೆಂಬಲ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಲಾದ ರಾಗಿಯನ್ನು ಪಡಿತರ ವ್ಯವಸ್ಥೆಯಡಿಯಲ್ಲಿ ರಾಗಿ ಉಪಯೋಗಿಸುತ್ತಿರುವ ರಾಜ್ಯದ ಜಿಲ್ಲೆಗಳಲ್ಲಿ ವಿತರಿಸಲಾಗುತ್ತಿದೆ. ಆದರೆ, ಈ ರಾಗಿಯ ಪ್ರಮಾಣ ಜಿಲ್ಲೆಗಳ ಬೇಡಿಕೆಗಿಂತ ಬಹಳ ಕಡಿಮೆ ಆಗಿರುತ್ತದೆ. ಹಾಲಿ ನೀಡುತ್ತಿರುವ ಪಡಿತರ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾಪವಿರುವುದಿಲ್ಲ.

**ರಾಜ್ಯದಾದ್ಯಂತ ಅಂಗನವಾಡಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವವರನ್ನು ಖಾಯಂಗೊಳಿಸುವುದು**

3229 (3703) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯಾದ್ಯಂತ ಯಾವ ಯಾವ ಅಂಗನವಾಡಿಗಳಲ್ಲಿ ಯಾವ ಯಾವ ಹುದ್ದೆಯಲ್ಲಿ ಎಷ್ಟೆಷ್ಟು ಮಂದಿ ಮಹಿಳೆಯರು ಕೆಲಸ ನಿರ್ವಹಿಸುತ್ತಿರುವವರು.

ಆ) ಇವರುಗಳು ಎಷ್ಟೆಷ್ಟು ವರ್ಷಗಳಿಂದ ತಾತ್ಕಾಲಿಕವಾಗಿ ಕೆಲಸ ನಿರ್ವಹಿಸುತ್ತಿರುವರು.

ಇ) ಇವರುಗಳಿಗೆ ನೀಡುತ್ತಿರುವ ಸಂಭಾವನೆ ಸಂಬಳ:ಗೌರವಧನದ ವಿವರ ನೀಡುವುದು.